(ಗೊಂದಲ)

ಶ್ರೀ ಜೆ.ಸಿ. ಮಾಧುಸ್ವಾಮಿ: XX

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2006ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು.

(ಉ) ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ 2006.

ಪರ್ಯಾಲೋಚನಾ ಪ್ರಸ್ತಾವ.

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, "2006ರ ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ನಾನು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2 ರಿಂದ 4 ರವರೆಗೆ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ "ಖಂಡ 2 ರಿಂದ 4ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 4 ರವರೆಗೆ, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ :

ಅಧ್ಯಕ್ಷರು : ಪ್ರಸ್ತಾವ ಏನೆಂದರೆ "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಮೊದಲನೆಯ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ.

ಶ್ರೀ ಬಿ. ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೇ "2006ರ ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ನಾನು ಕೋರುತ್ತೇನೆ"

XX ಸನ್ಮಾನ್ಯ ಸಭಾಧ್ಯಕ್ಷರ ಆದೇಶದ ಮೇರೆಗೆ ಕಡತದಿಂದ ತೆಗೆದು ಹಾಕಲಾಗಿದೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2006ರ ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು.

(iii) ವಿಧೇಯಕಗಳ ಮಂಡನೆ.

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ(ಎರಡನೇ ತಿದ್ದುಪಡಿ)ವಿಧೇಯಕ 2006. ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, "2006ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ " 2006ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕವನ್ನು' ಮಂಡಿಸಲು ಅನುಮತಿ ನೀಡುವುದು."

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು)

ಶ್ರೀ ಹೆಚ್. ಡಿ. ಕುಮಾರಸ್ವಾಮಿ (ಮುಖ್ಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, "2006ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

(ಅನುಬಂಧ – VI)

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಆ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ತಿದ್ದುಪಡಿ) ವಿಧೇಯಕ 2006. ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೇ, "2006ರ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿಯನ್ನು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ "2006ರ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು)

ಶ್ರೀ ಬಿ. ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೇ, 2006ರ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.